# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 01 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 410 |
| 02 | ಸದಸ್ಯರ ಹೆಸರು | : ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 03 | ಉತ್ತರಿಸುವ ದಿನಾಂಕ | : 18.07.2024 |
| 04 | ಉತ್ತರಿಸುವ ಸಚಿವರು | : ಮಾನ್ಯ ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಕ್ರಮವಾಗಿ ಬಂದು ನೆಲೆಸಿರುವ ವಿದೇಶಿ ಪ್ರಜೆಗಳನ್ನು ಗುರುತಿಸಲು ಸರ್ಕಾರದ ಬಳಿಯಿರುವ ನೀತಿ ನಿಯಮಗಳೇನು; | ರಾಜ್ಯದಲ್ಲಿ ಅಕ್ರಮವಾಗಿ ಬಂದು ನೆಲೆಸಿರುವ ವಿದೇಶಿ ಪ್ರಜೆಗಳನ್ನು ಗುರುತಿಸಲು ಪೊಲೀಸ್ ಇಲಾಖೆ ಕೈಗೊಂಡಿರುವ ಕ್ರಮಗಳೆಂದರೆ:-<br>1. ರಾಜ್ಯದಲ್ಲಿ ಅಕ್ರಮ ವಲಸಿಗರನ್ನು ಪತ್ತೆಹಚ್ಚಲು ಪೊಲೀಸ್ ಠಾಣಾ ಮಟ್ಟದಲ್ಲಿ ಗುಪ್ತಚರ ಸಿಬ್ಬಂದಿ ಹಾಗೂ ಕ್ರೈಂ ಸಿಬ್ಬಂದಿಗಳು ವಿದೇಶಿಯರ ಚಲನವಲನಗಳ ಮೇಲೆ ನಿಗಾ ವಹಿಸುವಂತೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ.<br>2. ರಾಜ್ಯಾದ್ಯಂತ ಠಾಣಾ ಮಟ್ಟದಲ್ಲಿ ಚಿಂದಿ ಆಯುವ ಕೆಲಸ ಮಾಡುವ ವ್ಯಕ್ತಿಗಳ ಮೇಲೆ ಹಾಗೂ ಇವರು ನೆಲೆಸಿರುವ ಸ್ಥಳಗಳ ಬಳಿ ಹೆಚ್ಚಿನ ನಿಗಾವಹಿಸುವಂತೆ, ಇವರ ಚಲನವಲನಗಳ ಮೇಲೆ ಸೂಕ್ತ ಗಮನಹರಿಸುವಂತೆ ಎಲ್ಲಾ ವಿಭಾಗೀಯ ಉಪ ಆಯುಕ್ತರುಗಳಿಗೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ.<br>3. ರಾಜ್ಯದಲ್ಲಿ ಹೆಚ್ಚು ವಿದೇಶಿ ಪ್ರಜೆಗಳು ವಾಸಿಸುವ ಸ್ಥಳಗಳ ಬಳಿ ಸತತ ನಿಗಾವಹಿಸಲು ಮೀಸಲು ಪಡೆ ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮ ಜರುಗಿಸಲು ಎಲ್ಲಾ ವಿಭಾಗೀಯ ಉಪ ಆಯುಕ್ತರುಗಳಿಗೆ ಸೂಚಿಸಲಾಗಿರುತ್ತದೆ<br>4. ರಾಜ್ಯದಲ್ಲಿ ಅವಧಿ ಮೀರಿ ವಾಸವಾಗಿರುವ ಹಾಗೂ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಪತ್ತೆಯಾದಲ್ಲಿ ಅಂತಹ ಆರೋಪಿಗಳನ್ನು ಅವರ ದೇಶದ ರಾಯಭಾರಿ ಕಛೇರಿ ಮೂಲಕ ಆಯಾ ದೇಶಗಳಿಗೆ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ (Ministry of External Affairs) ಮಾಹಿತಿಯನ್ನು ನೀಡಲಾಗುತ್ತಿದೆ<br>5.ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳ ವಿರುದ್ಧ ಪ್ರಕರಣ ದಾಖಲಿಸಿ ಮಾನ್ಯ ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೂ ಸಂಬಂಧಪಟ್ಟ ಇಲಾಖೆಯಿಂದ ನಿರ್ಗಮನ ಪರವಾನಗಿ(Exit Permit)ಯನ್ನು ಪಡೆಯುವವರೆಗೆ, ಸದರಿಯವರುಗಳನ್ನು ಡಿಟೆನ್ಷನ್ ಸೆಂಟರ್‌ನಲ್ಲಿ ಇರಿಸಿ, ಪ್ರಕರಣ ಇತ್ಯರ್ಥವಾದ ನಂತರ ವಿದೇಶಿ ಪ್ರಜೆಯ ಗಡಿಪಾರು ನಿಯಮವನ್ನು ಪಾಲಿಸಲಾಗುತ್ತಿದೆ.<br>6. ರಾಜ್ಯದಲ್ಲಿ ವೀಸಾ ಅವಧಿ ಮುಗಿದ ನಂತರವೂ ಕೂಡ ನೆಲೆಸಿರುವ ವಿದೇಶಿ ಪ್ರಜೆಗಳನ್ನು ಕಮಿಷನರೇಟ್ ವ್ಯಾಪ್ತಿಯ |

| | | |
|---|---|---|
| | | ವಿಭಾಗೀಯ ಉಪ ಆಯುಕ್ತರುಗಳು ಹಾಗೂ ಜಿಲ್ಲೆಗಳ ಪೊಲೀಸ್ ಅಧೀಕ್ಷಕರುಗಳು ಪತ್ತೆ ಮಾಡಿ ಕ್ರಮ ಕೈಗೊಳ್ಳುವಂತೆಯೂ ಹಾಗೂ ಪತ್ತೆ ಮಾಡಲು ಠಾಣೆಗಳಿಂದ ನುರಿತ ಅಧಿಕಾರಿ ಮತ್ತು ಸಿಬ್ಬಂದಿಯವರುಗಳನ್ನು ನೇಮಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. |
| ಆ) | ಇವರು ಪ್ರವಾಸಿ ವೀಸಾ ಪಡೆದು ಭಾರತಕ್ಕೆ ಬಂದು ವೀಸಾ ಅವಧಿ ಮುಗಿದ ಮೇಲೂ ಅಕ್ರಮವಾಗಿ ದೇಶದಲ್ಲಿ ನೆಲೆಸಿ ಸಮಾಜ ಬಾಹಿರ ಕೃತ್ಯದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೆಲವು ಪ್ರಕರಣಗಳಲ್ಲಿ ಆ ರೀತಿಯ ಕೃತ್ಯಗಳು ಗಮನಕ್ಕೆ ಬಂದಿದೆ. |
| ಇ) | ಬಂದಿದ್ದಲ್ಲಿ, ಇಂತಹ ಅಕ್ರಮ ವಲಸಿಗರು ತಾಂತ್ರಿಕ ನೈಪುಣ್ಯತೆ ಪಡೆದಿದ್ದು, ಅಮಾಯಕ ಗ್ರಾಮೀಣ ಅನಕ್ಷರಸ್ಥ ಬಡಜನರ ಬ್ಯಾಂಕ್ ಖಾತೆಗಳಲ್ಲಿನ ಹಣ ದೋಚುತ್ತಿದ್ದು ಇಂತಹ ಪ್ರಕರಣಗಳಲ್ಲಿ ಹಣ ಕಳೆದುಕೊಂಡವರಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು) | ದುಷ್ಕರ್ಮಿಗಳು ಬಡಜನರ ಬ್ಯಾಂಕ್ ಖಾತೆಗಳಲ್ಲಿನ ಹಣವನ್ನು ದೋಚುತ್ತಿರುವುದನ್ನು ತಡೆಗಟ್ಟಲು ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಹಾಗೂ ಹಣವನ್ನು ಕಳೆದುಕೊಂಡವರಿಗಾಗಿ ಅವರ ಹಣವನ್ನು ವಾಪಸ್ ಕೊಡಿಸಲು ಅವರ ಹಣದ ಭದ್ರತೆಯ ಬಗ್ಗೆ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-<br>➢ ಸಾರ್ವಜನಿಕರು ಸೈಬರ್ ಕ್ರೈಂ ವಂಚನೆಗೊಳಗಾದ ಕೂಡಲೇ ಸಹಾಯವಾಣಿ ಸಂಖ್ಯೆ: 1930ಗೆ ಕರೆ ಮಾಡಿ ದೂರು ದಾಖಲಿಸುವಂತೆ ಸೂಚಿಸಲಾಗಿದೆ.<br>➢ ಸೈಬರ್ ಟಿಪ್ ಆಫ್ ದಿ ಡೇ ಎಂಬ ಕಾರ್ಯಕ್ರಮದ ಮೂಲಕ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಸಾಮಾಜಿಕ ಮಾಧ್ಯಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>➢ ಬೆಂಗಳೂರು ನಗರದಲ್ಲಿ ಸೈಬರ್ ಅಪರಾಧಕ್ಕೆ ವಂಚಿತರಾದ ಸಾರ್ವಜನಿಕರು ದೂರನ್ನು ನೀಡಲು ಬೆಂಗಳೂರು ನಗರದಾದ್ಯಂತ ಎಲ್ಲಾ ವಿಭಾಗಗಳು ಸೇರಿದಂತೆ ಒಟ್ಟು 9 ಸೈಬರ್ ಕ್ರೈಂ ಪೊಲೀಸ್ ಠಾಣೆಗಳನ್ನು ತೆರೆಯಲಾಗಿದ್ದು, ಎಲ್ಲಾ ಸೈಬರ್ ಪೊಲೀಸ್ ಠಾಣೆಗಳಿಗೆ ನುರಿತ ಮತ್ತು ತರಬೇತಿ ಹೊಂದಿದ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ನೇಮಿಸಲಾಗಿದೆ.<br>➢ ಸಾರ್ವಜನಿಕರಿಗೆ ಶೀಘ್ರ ಸ್ಪಂದನೆಗಾಗಿ ಹಾಗೂ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ನುರಿತ ತರಬೇತಿ ಹೊಂದಿದ ಅಧಿಕಾರಿ/ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ಪ್ರಕರಣದ ಪತ್ತೆಗಾಗಿ ಕ್ರಮ ಕೈಗೊಳ್ಳಲಾಗಿದೆ.<br>➢ ಸೈಬರ್ ವಂಚನೆ ಪ್ರಕರಣಗಳು ದಾಖಲಾದ ಕೂಡಲೇ ಹಣ ವರ್ಗಾವಣೆ ತಡೆಗಟ್ಟಲು ಹಾಗೂ ಪ್ರಕರಣವನ್ನು ಪತ್ತೆಹಚ್ಚಲು ಖಾಸಗಿ ಕಂಪನಿಗಳ ಸಹಭಾಗಿತ್ವದಲ್ಲಿ ಹೊಸ ತಂತ್ರಾಂಶ ಹಾಗೂ ಎ.ಐ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಪರಿಣಿತರ ಮಾರ್ಗದರ್ಶನದಲ್ಲಿ ಸೈಬರ್ ಕ್ರೈಂಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಸೂಕ್ತ ಕ್ರಮ ವಹಿಸಲಾಗಿದೆ.<br>➢ ಸೈಬರ್ ಅಪರಾಧ ಪ್ರಕರಣಗಳಿಗೆ ಸಂಬಂಧಿಸಿದಂತೆ ಬ್ಯಾಂಕ್ ಹಾಗೂ ಸಾಮಾಜಿಕ ಮಾಧ್ಯಮ ಅಧಿಕಾರಿಗಳೊಂದಿಗೆ ಸಮನ್ವಯ ಸಭೆಗಳನ್ನು ನಡೆಸಿ ತನಿಖೆಗೆ ಸಹಕರಿಸುವಂತೆ ಸೂಚನೆಗಳನ್ನು ನೀಡಲಾಗಿದೆ.<br>➢ ಸೈಬರ್ ಕ್ರೈಂ ಪ್ರಕರಣಗಳ ತನಿಖೆಯ ಕುರಿತು ಮಾನ್ಯ ಸಿಓಪಿ/ಸಿಐಡಿ ವಿಭಾಗದಿಂದ ಹಂತ ಹಂತವಾಗಿ ಅಧಿಕಾರಿ |

| | | |
|---|---|---|
| | | ಮತ್ತು ಸಿಬ್ಬಂದಿಗಳಿಗೆ ಲೆವೆಲ್-1 ಮತ್ತು ಲೆವೆಲ್-2 ತರಬೇತಿಯನ್ನು ನೀಡಿ ಪ್ರಕರಣಗಳನ್ನು ಶೀಘ್ರವಾಗಿ ಪತ್ತೆ ಹಚ್ಚಲು ಸಹಕಾರ ನೀಡಲಾಗುತ್ತಿದೆ.<br>➢ ಮೊಬೈಲ್/ವಿದ್ಯುನ್ಮಾನ ಯಂತ್ರಗಳನ್ನು ಉಪಯೋಗಿಸಿ ಕೊಂಡು ಕೃತ್ಯವೆಸಗಿರುವ ದತ್ತಾಂಶ/ಸಾಕ್ಷ್ಯಗಳನ್ನು ರಿಟ್ರೀವ್ ಮಾಡಲು ಠಾಣೆಗೆ ಅಗತ್ಯವಾದ ಉಪಕರಣಗಳನ್ನು ನೀಡಲಾಗಿದೆ.<br>➢ ಹಣ ವಂಚನೆ ಪ್ರಕರಣ ದಾಖಲಾದ ಕೂಡಲೇ ಆರೋಪಿಗಳ ಅಕೌಂಟನ್ನು ಫ್ರೀಜ್ ಮಾಡಿಸಿ ಆರೋಪಿಗಳ ಖಾತೆಯಿಂದ ಹಣ ವಾಪಸ್ಸು ಪಡೆಯಲು ಕ್ರಮ ಕೈಗೊಳ್ಳಲಾಗಿದೆ.<br>➢ ಬೆಂಗಳೂರು ನಗರದಲ್ಲಿ ಸೈಬರ್ ವಂಚನೆ ಬಗ್ಗೆ ಸಾರ್ವಜನಿಕರೊಂದಿಗೆ ಸಭೆ ನಡೆಸುವುದು, ಕರ ಪತ್ರ ಹಂಚುವುದು, ಸಾಮಾಜಿಕ ಜಾಲತಾಣಗಳಲ್ಲಿ ಸಾಕ್ಷ್ಯ ಚಿತ್ರದ ಮೂಲಕ ಅರಿವು ಮೂಡಿಸುತ್ತಿದ್ದು, ಸೈಬರ್ ವಂಚಕರ ಜಾಲಕ್ಕೆ ಬೀಳದಂತೆ ಮುನ್ನೆಚ್ಚರಿಕೆ ತೆಗೆದುಕೊಳ್ಳುವಂತೆ ಸೂಚಿಸಲಾಗುತ್ತಿದೆ.<br>➢ ಮೊಬೈಲ್‌ನಲ್ಲಿ ಓಟಿಪಿ, ಬ್ಯಾಂಕ್ ಮಾಹಿತಿ ಮತ್ತು ಆಧಾರ್ ಮಾಹಿತಿಯನ್ನು ನೀಡದಂತೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಲಾಗಿದೆ.<br>➢ ಸೈಬರ್ ಕ್ರೈಂಗೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚಿನ ಜಾಗೃತಿಯನ್ನು ನೀಡಲಾಗುತ್ತಿದೆ. |
| ಈ) | ಇವರು ಅಕ್ರಮವಾಗಿ ಗಾಂಜಾ, ಅಫೀಮು, ಚರಸ್ ಮಾರಾಟ ದಂಧೆಯಲ್ಲಿ ತೊಡಗಿದ್ದು, ಇದರಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಅಕ್ರಮ ವಿದೇಶಿ ವಲಸಿಗರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಕಳೆದ ಮೂರು ವರ್ಷದ ಮಾಹಿತಿ ನೀಡುವುದು) | ಬಂದಿದೆ.<br><br>ಅಕ್ರಮವಾಗಿ ನೆಲೆಸಿರುವ ಹಲವಾರು ಇಂತಹ ವಿದೇಶಿ ಪ್ರಜೆಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ಮಾದಕ ವಸ್ತು ಮಾರಾಟ ದಂಧೆಯಲ್ಲಿ ತೊಡಗಿರುವ ವಿದೇಶಿಯರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಅಂಕಿ-ಅಂಶಗಳನ್ನು ಕೆಳಕಂಡಂತೆ ವಿವರಿಸಲಾಗಿದೆ:-<br><br>**ವರ್ಷ** / **ವಿದೇಶಿಯರ ವಿರುದ್ಧ ದಾಖಲಿಸಿರುವ ಮಾದಕ ವಸ್ತು ಪ್ರಕರಣಗಳ ಸಂಖ್ಯೆ** / **ಬಂಧಿಸಿದ ವಿದೇಶಿ ಪ್ರಜೆಗಳ ಸಂಖ್ಯೆ**<br>2021 / 143 / 186<br>2022 / 101 / 122<br>2023 / 81 / 99<br>2024 (30ರ ಜೂನ್) / 26 / 36<br><br>ಡ್ರಗ್ಸ್ ಮಾರಾಟ ದಂಧೆಯಲ್ಲಿ ವಿದೇಶಿಯರು ಭಾಗಿಯಾಗಿರುವುದನ್ನು ಗಂಭೀರವಾಗಿ ಪರಿಗಣಿಸಿ ವಿದೇಶಿಯರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಂಡು, ಪಕರಣಗಳನ್ನು ದಾಖಲಿಸಿ ಕ್ರಮ ಜರುಗಿಸಲಾಗಿದೆ. ಈ ದಂಧೆಯನ್ನು ತಡೆಯಲು ಹಲವಾರು ಕ್ರಮಗಳನ್ನು ಕೈಗೊಂಡಿದ್ದು ಅವುಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ:-<br>➢ ಪದೇ ಪದೇ ಡ್ರಗ್ಸ್ ಅಕ್ರಮಗಳಲ್ಲಿ ಭಾಗಿಯಾಗಿದ್ದ 5 ಜನ ವಿದೇಶಿಯರನ್ನು PIT-NDPS ಕಾಯ್ದೆ ಅಡಿಯಲ್ಲಿ 1 ವರ್ಷಗಳ ವರೆಗೆ ಬಂಧನದಲ್ಲಿಡಲಾಗಿದೆ. |

Nested table within the answer cell:

| ವರ್ಷ | ವಿದೇಶಿಯರ ವಿರುದ್ಧ ದಾಖಲಿಸಿರುವ ಮಾದಕ ವಸ್ತು ಪ್ರಕರಣಗಳ ಸಂಖ್ಯೆ | ಬಂಧಿಸಿದ ವಿದೇಶಿ ಪ್ರಜೆಗಳ ಸಂಖ್ಯೆ |
|---|---|---|
| 2021 | 143 | 186 |
| 2022 | 101 | 122 |
| 2023 | 81 | 99 |
| 2024 (30ರ ಜೂನ್) | 26 | 36 |

| | | |
|---|---|---|
| | | ➢ ಅಕ್ರಮವಾಗಿ ನೆಲೆಸಿರುವ ವಿದೇಶಿಗರನ್ನು ಪತ್ತೆ ಮಾಡಿ ಎಫ್.ಆರ್.ಆರ್.ಓ ರವರ ಮೂಲಕ ಅವರ ದೇಶಗಳಿಗೆ ವಾಪಸ್ ಕಳುಹಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಡ್ರಗ್ಸ್ ಮಾರಾಟ ಮಾಡುವ ವಿದೇಶಿಯರ ಮಾಹಿತಿಯನ್ನು ಸಾರ್ವಜನಿಕರು ಟೋಲ್ ಫ್ರೀ ಸಂಖ್ಯೆ: 1908 ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>➢ ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಂಡು ಹಾಗೂ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗಿಂದಾಗ್ಗೆ ವಿದೇಶಿಯರ ಜೊತೆ ಸಭೆಯನ್ನು ನಡೆಸಿ ವಿದೇಶಿಯರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಉಪನ್ಯಾಸದ ಮೂಲಕ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ.<br>➢ ವಿದೇಶಗಳಿಂದ ಮಾದಕ ವಸ್ತುಗಳು ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ Bitcoin ಬಳಸಿ ಡಾರ್ಕನೆಟ್ ಮುಖಾಂತರ ಡ್ರಗ್ಸ್ ಸರಬರಾಜು ಜಾಲವನ್ನು ಪತ್ತೆಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.<br>➢ ವಿದೇಶಿಯರಿಂದ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.<br>➢ ವಿದೇಶಿಯರು ವಿಶೇಷವಾಗಿ ನೈಜೀರಿಯನ್ಸ್ ಪ್ರಜೆಗಳು ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿರುವ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಸೂಚಿಸಲಾಗಿದ್ದು, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ. ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತವರ ವಿರುದ್ಧ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ವಿದೇಶಿಯರಿಂದ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. |

| | | |
|---|---|---|
| | | ➢ ಮಾದಕದ್ರವ್ಯ (ಡ್ರಗ್ಸ್) ಹಾವಳಿಯನ್ನು ತಡೆಗಟ್ಟಲು ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿರುತ್ತದೆ.<br>➢ ಬಾರ್ ಮತ್ತು ರೆಸ್ಟೋರೆಂಟ್, ಕೆಫೆ, ಪಬ್, ಡಾನ್ಸ್ ಬಾರ್ ಮುಂತಾದವುಗಳಲ್ಲಿ ವಿದೇಶಿಯರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ-ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ. |

ಒಇ 263 ಪಿಎಂಎಸ್ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು